(ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು)

ಅಸಲು ದಾವೆ ನಂ.124/2009

ದಿನಾಂಕಃ 29-10-2024, ಡಿ ಡ್ಲ್ಯೂ-3

| | |
|---|---|
| ಹೆಸರುಃ | ಬಿ ಟಿ ಕೃಷ್ಣ |
| ತಂದೆಯ ಹೆಸರುಃ | ತಿಮ್ಮೇಗೌಡ |
| ವಯಸ್ಸುಃ | 55 ವರ್ಷ |
| ವೃತ್ತಿಃ | ವ್ಯವಸಾಯ |
| ವಾಸಃ | ಬಾಣದಹಳ್ಳಿ ಗ್ರಾಮ |

**ಪ್ರತಿವಾದಿಯರ ಪರ ಸಾಕ್ಷಿದಾರರ ಮುಖ್ಯ ವಿಚಾರಣೆಃ ಶ್ರೀ ಆರ್ ಕೆ ಎಂ ವಕೀಲರಿಂದಃ**

ಈ ಪ್ರಕರಣದಲ್ಲಿ ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಹೇಳಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದರ ಪ್ರತಿ ಪುಟದಲ್ಲಿರುವ ಸಹಿಯೂ ನನ್ನದೇ ಆಗಿರುತ್ತದೆ.

1ನೇ ಪ್ರತಿವಾದಿ ವಾದಿ ಮತ್ತು 2 ಮತ್ತು 3 ಪ್ರತಿವಾದಿಯರಿಗೆ ಮರಣ ಶಾಸನ ಪತ್ರವನ್ನು ಬರೆದುಕೊಟ್ಟಿರುತ್ತಾರೆ. ಅದಕ್ಕೆ ನಾನು ಸಹಿ ಮಾಡಿರುತ್ತೇನೆ. ಸಾಕ್ಷಿಯು ಮರಣ ಶಾಸನ ಪತ್ರ ಹಾಗೂ ಮರಣ ಶಾಸನ ಪತ್ರದಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಮರಣ ಶಾಸನ ಪತ್ರವನ್ನು ಈಗಾಗಲೇ ನಿಡಿ -10 ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಡಿ-10ಜಿ ಗುರುತಿಸಲಾಯಿತು.

ವಾದಿ ಪರ ವಕೀಲರು ಪಾಟೀ ಸವಾಲಿಗೆ ಕಾಲವಕಾಶವನ್ನು ಕೋರಿದ್ದು ಕಾಲವಕಾಶ ನೀಡಲಾಯಿತು.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ.ಕೇ.ಸ. ಇದೆ.

(**ರಘು ಎಂ**.)

**2ನೇ ಅಧಿಕ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ**

**ಅರಕಲಗೂಡು**.

®